# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** **ದಿನಾಂಕ:01.04.2020**

**ಸೇಂಟ್ ಜಾನ್ಸ್ ಆಸ್ಪತ್ರೆಯಲ್ಲಿ ಕೋವಿಡ್-19 ಚಿಕಿತ್ಸೆಗೆ 200 ಆಸನಗಳ ವ್ಯವಸ್ಥೆ ಮಾಡಿರುವ ಬಗ್ಗೆ:**



ಸೇಂಟ್ ಜಾನ್ಸ್ ಆಸ್ಪತ್ರೆಯಲ್ಲಿ ಕೊವಿಡ್-19 ಸಂಬಂಧಿಸಿದ ಚಿಕಿತ್ಸೆಗಾಗಿ ಅತ್ಯಾಧುನಿಕ ಸೌಲಭ್ಯಗಳುಳ್ಳ 200 ಆಸನಗಳನ್ನು ಮೀಸಲಿರಿಸಿದ್ದು, ಅದರ ಪತ್ರವನ್ನು ಪಾಲಿಕೆ ಕೇಂದ್ರ ಕಛೇರಿ ಸಭಾಂಗಣ-01ರಲ್ಲಿ ಪೂಜ್ಯ ಮಹಾಪೌರು, ಮಾನ್ಯ ಉಪಮುಖ್ಯಮಂತ್ರಿಗಳು ಡಾ. ಸಿ.ಎನ್.ಅಶ್ವತ್ಥ ನಾರಾಯಣ್ ರವರು ಸ್ವೀಕರಿಸಿದರು. ಈ ವೇಳೆ ಆಯುಕ್ತರು ಶ್ರೀ ಬಿ.ಹೆಚ್.ಅನಿಲ್ ಕುಮಾರ್, ಸಾರ್ವಜನಿಕ ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು ಶ್ರೀ ಮಂಜುನಾಥ ರಾಜು.ಜಿ, ಆಡಳಿತ ಪಕ್ಷದ ನಾಯಕರು ಶ್ರೀ ಮುನೀಂದ್ರ ಕುಮಾರ್, ಸೆಂಟ್ ಜಾನ್ಸ್ ನ್ಯಾಷನಲ್ ಅಕಾಡೆಮಿ ಆಫ್ ಹೆಲ್ತ್ ಸೈನ್ಸ್ ಅಧ್ಯಕ್ಷರು ಡಾ. ಪಾಲ್ ಪಾರ್ಥಜಾಮ್, ಪೋರ್ಟಿಯಾ ಮೆಡಿಕಲ್ ಸಂಸ್ಥೆ ಸಂಸ್ಥಾಪಕರು ಮೀನಾ ಗಣೇಶ್ ಹಾಗೂ ಇತರೆ ಗಣ್ಯರುಗಳು ಉಪಸ್ಥಿತರಿದ್ದರು.

ಕೊರೋನಾ ವೈರೆಸ್ ಸೋಂಕು ತಡೆಗಟ್ಟುವ ಹಿನ್ನೆಲೆಯಲ್ಲಿ ಈಗಾಗಲೇ ರಾಜ್ಯ ಸರ್ಕಾರ ಹಾಗೂ ಬಿಬಿಎಂಪಿ ವತಿಯಿಂದ ಹಲವಾರು ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಸೋಂಕಿತರ ಸಂಖ್ಯೆ ಹೆಚ್ಚಾದಲ್ಲಿ ಸಾಮರ್ಥ್ಯ ನಿಭಾಯಿಸಲು ಎಲ್ಲಾ ರೀತಿಯ ಪೂರ್ವಸಿದ್ಧತೆಗಳನ್ನು ಮಾಡಿಕೊಂಡಿದೆ. ಈ ನಿಟ್ಟಿನಲ್ಲಿ ಸೆಂಟ್ ಜಾನ್ಸ್ ಆಸ್ಪತ್ರೆಯಲ್ಲಿ ಕೊವಿಡ್-19 ಸಂಬಂಧಿಸಿದ ಚಿಕಿತ್ಸೆಗಾಗಿ ಅತ್ಯಾಧುನಿಕ ಸೌಲಭ್ಯಗಳುಳ್ಳ 200 ಆಸನಗಳನ್ನು ಮೀಸಲಿರಿದೆ ಎಂದು ಉಪಮುಖ್ಯಮಂತ್ರಿಗಳು ಡಾ. ಸಿ.ಎನ್.ಅಶ್ವತ್ಥ ನಾರಾಯಣ್ ರವರು ತಿಳಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಉಪಮುಖ್ಯಮಂತ್ರಿಗಳು, ಕೋವಿಡ್-19 ಚಿಕಿತ್ಸೆಗಾಗಿ ಮೀಸಲರಿಸಿರುವ ಬ್ಲಾಕ್‌ನಲ್ಲಿ 200 ಆಸನಗಳ ವ್ಯವಸ್ಥೆ, ಅವಶ್ಯಕ ವೆಂಟಿಲೇಟರ್ಸ್, ಐಸೋಲೇಷನ್ ಕೊಠಡಿ, ಐಸಿಯು ಕೊಠಡಿ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಹೊದಗಿಸಿಕೊಂಡಿದ್ದಾರೆ. ಸರ್ಕಾರ ಹಾಗೂ ಬಿಬಿಎಂಪಿ ಪರವಾಗಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಸೆಂಡ್ ಜಾನ್ಸ್ ಆಸ್ಪತ್ರೆ ನಿರ್ದೇಶಕ ಡಾ. ಪಾಲ್ ಸಾರ್ಥಜಾಮ್ ರವರು ಮಾತನಾಡಿ, ಕೋವಿಡ್-19ಗೆ ಚಿಕಿತ್ಸೆ ನೀಡುವ ಸಲುವಾಗಿ ಸೆಂಟ್ ಜಾನ್ಸ್ ಆಸ್ಪತ್ರೆಯಲ್ಲಿ 200 ಆಸನಗಳ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಸೋಂಕಿತರು, ಶಂಕಿತರಿಗೆ ಪ್ರತ್ಯೇಕ ಐಸೋಲೇಷನ್ ವಾರ್ಡ್ ನಿರ್ಮಿಸಲಾಗಿದೆ. ಎಲ್ಲಾ ಸಿಬ್ಬಂದಿ, ಅಧಿಕಾರಿಗಳಿಗೂ ಕೊರೋನ ಬಗ್ಗೆ ತರಬೇತಿ ನೀಡಲಾಗಿದೆ. 15 ಐಸಿಯು ಬೆಡ್ ಜೊತೆಗೆ ವೆಂಟಿಲೇಟರ್ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

**<u>'ಟೆಲಿ ಕನ್ಸಲ್ಟೇಷನ್' ಸೇವೆ ಜಾರಿ:</u>**

ಕೊರೊನಾ ವೈರೆಸ್ ಸೋಂಕಿನ ಲಕ್ಷಣಗಳು, ಸಂಬಂಧಿತ ಆರೋಗ್ಯ ಸಮಸ್ಯೆಗಳು ಹಾಗೂ ಈ ಕುರಿತ ಯಾವುದೇ ಸಂದೇಹಗಳನ್ನು ಪರಿಹರಿಸಿಕೊಳ್ಳಲು ಸಾರ್ವಜನಿಕರು ನುರಿತ ವೈದ್ಯರ ಜೊತೆ ದೂರವಾಣಿ ಮೂಲಕ ಮಾತುಕತೆ ನಡೆಸಲು ಪೋರ್ಟಿಯಾ ಮೆಡಿಕಲ್ ಸಂಸ್ಥೆ ವತಿಯಿಂದ **'ಟೆಲಿ ಕನ್ಸಲ್ಟೇಷನ್'** ಸೇವೆ ಜಾರಿಗೊಳಿಸಿದ್ದು, ಉಚಿತ ಸಹಾಯವಾಣಿ **08066744788**ಗೆ ಕರೆ ಮಾಡಿ ಅಗತ್ಯ ಮಾಹಿತಿ ಪಡೆಯಬಹುದಾಗಿದೆ ಎಂದು ಉಪಮುಖ್ಯಮಂತ್ರಿಗಳು ಡಾ. ಸಿ.ಎನ್.ಅಶ್ವತ್ಥ ನಾರಾಯಣ್ ರವರು ತಿಳಿಸಿದರು.

ಕೋರೋನಾ ಮಾತ್ರವಲ್ಲದೆ ಇನ್ನಿತ ಆರೋಗ್ಯ ಸಮಸ್ಯೆ ಬಗ್ಗೆಯೂ ಮಾಹಿತಿ ಪಡೆಯಬಹುದಾಗಿದೆ. ವೈದ್ಯರ ತಂಡ ಸೋಮವಾರದಿಂದ ಶನಿವಾರದವರೆಗೆ ಬೆಳಗ್ಗೆ 8 ರಿಂದ ರಾತ್ರಿ 8ರವರೆಗೆ ಹಾಗೂ ಭಾನುವಾರ ಬೆಳಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಸಾರ್ವಜನಿಕರಿಂದ ಕರೆ ಸ್ವೀಕರಿಸಿ ಸೂಕ್ತ ಮಾರ್ಗದರ್ಶನ ನೀಡಲಿದೆ. ಅಲ್ಲದೆ, ವೆಬ್‌ಸೈಟ್ ಲಿಂಕ್: https://t.co/LqPmTkiEnY ಗೆ ಭೇಟಿ ನೀಡಿ ಅಲ್ಲಿಂದಲೂ ವೈದ್ಯರ ಸಲಹೆ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**